ದಿನಾಂಕಃ 31-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ- 1 ರಿಂದ 3 ನೇ ಪ್ರತಿವಾದಿಗಳ ಪರವಾಗಿ ಶ್ರೀ. ವಿ.ಆರ್.ಆರ್. ವಕೀಲರಿಂದಃ-**

ದಾವಾ ಐಟಂ ನಂ.2 ರ ಆಸ್ತಿಯನ್ನು ಕೆರೆ ಒತ್ತುವರಿಗೆ ಸರ್ಕಾರದವರು ಸ್ವಾಧೀನಪಡಿಸಿಕೊಂಡಿರುವುದಿಲ್ಲ. ಸರ್ವೆ ನಂಬರ್. 59/3 ರ ಆಸ್ತಿಯನ್ನು ಸರ್ವೆ ನಂಬರ್ 59/5 ಎಂದು ಮಾಡಿಕೊಂಡು ಸರ್ಕಾರದವರು ಕೆರೆಗೆ ಒತ್ತುವರಿ ಮಾಡಿಕೊಂಡಿದ್ದಾರೆ ಎಂದರೆ ಸರಿ. ಸರ್ವೆ ನಂಬರ್ 59/5 ರ ಆಸ್ತಿ ಈಗ ಸರ್ಕಾರದ ಹೆಸರಿನಲ್ಲಿದೆ. ದಾವಾ ಐಟಂ ನಂ.1 ರ ಆಸ್ತಿಯ ಕಂದಾಯ ದಾಖಲೆಗಳು ಪ್ರತಿವಾದಿಯರ ಹೆಸರಿನಲ್ಲಿವೆ. ಆ ಆಸ್ತಿಯ ಸ್ವಾಧೀನದಲ್ಲಿ ಯಾರು ಇರುತ್ತಾರೋ ಅವರ ಹೆಸರಿನಲ್ಲಿಯೇ ಪಹಣಿ ಮತ್ತು ಕಂದಾಯ ದಾಖಲೆಗಳು ಬರುತ್ತವೆ ಎಂದರೆ ಸರಿ. ಸರ್ವೆ ನಂಬರ್ 126 ರ ಆಸ್ತಿ ಪ್ರತಿವಾದಿಯರ ಹೆಸರಿನಲ್ಲಿರುವ ಬಗ್ಗೆ ದಾಖಲೆಗಳನ್ನು ನಾನು ನೋಡಿರುತ್ತೇನೆ. ಈ ಆಸ್ತಿಗೆ ಸಬಂಧಪಟ್ಟ ಕಂದಾಯ ಇಲಾಖೆಯ ದಾಖಲೆಗಳು ಪ್ರತಿವಾದಿಗಳ ಹೆಸರಿನಲ್ಲಿರುವುದನ್ನು ನಾನು ಸಂಬಂಧಪಟ್ಟ ಇಲಾಖೆಯಲ್ಲಿ ಪ್ರಶ್ನಿಸಿರುತ್ತೇನೆ. ಈ ಬಗ್ಗೆ ಎಲ್ಲಾ ದಾಖಲೆಗಳು ನನ್ನ ಬಳಿ ಇವೆ. ಆ ದಾಖಲೆಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ದಾವಾ ಐಟಂ ನಂ.1ರ ಆಸ್ತಿಗೂ ಮತ್ತು ನನಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಆ ಆಸ್ತಿಯಲ್ಲಿ ಎಂದೂ ಸಹ ನಾನು

ಸ್ವಾಧೀನಾನುಭವದಲ್ಲಿ ಇಲ್ಲ ಎಂದರೆ ಸರಿಯಲ್ಲ. ನಾನು ದಾವಾ ಐಟಂ ನಂ.1ರ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿ ಇಲ್ಲದೇ ಇರುವುದರಿಂದ ತಪ್ಪು ಚಕ್ಕುಬಂಧಿಯನ್ನು ನಮೂದಿಸಿ ಈ ಸುಳ್ಳು ದಾವೆಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ದಾವಾ ಆಸ್ತಿಯ ಮಾಲೀಕನಲ್ಲ ಮತ್ತು ಈ ದಾವೆಯು ಊರ್ಜಿತವಾಗಿರುವುದಿಲ್ಲ ಎಂದರೆ ಸರಿಯಲ್ಲ.

ಸರ್ಕಾರದ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ